ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ **:** 03 ನೇ ಫೆಬ್ರುವರಿ, 2021

ಕೃಷಿಯಲ್ಲಿ ವಿವಿಧ ಗೊಬ್ಬರಗಳ ಬಳಕೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

302 (307) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಕೃಷಿಯಲ್ಲಿ ನಾಡೆಪ್ (NADEP) ಕಾಂಪೋಸ್ಟಿಂಗ್, ವರ್ಮಿ ಕಾಂಪೋಸ್ಟಿಂಗ್, ದ್ರವ ಜೈವಿಕ ಗೊಬ್ಬರವನ್ನು ಬಳಸುವ ಮೂಲಕ ಕೃಷಿ ವೆಚ್ಚವನ್ನು ಕಡಿತಗೊಳಿಸುವ ಬಗ್ಗೆ ಯಾವುದಾದರೂ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆಯೇ; (ವಿವರಗಳನ್ನು ಒದಗಿಸುವುದು)

(ಆ) ಈ ಗೊಬ್ಬರವನ್ನು ಬಳಸುವುದರ ಮೂಲಕ ಕೃಷಿ ಭೂಮಿ ಹೆಚ್ಚು ಫಲವತ್ತಾಗುತ್ತದೆ ಮತ್ತು ಹೆಚ್ಚಿನ ಇಳುವರಿಯನ್ನು ನೀಡುತ್ತದೆ ಎಂಬುದು ನಿಜವೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಇಂದಿನವರೆಗೆ ಪ್ರತಿ ಹೆಕ್ಟೇರ್‌ಗೆ ಬೆಳೆಗಳ ಸ್ಥಿತಿಯೇನು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೆಚ್ಚಿನ ಇಳುವರಿ ಪಡೆಯುತ್ತಿರುವ ರೈತರಿಗೆ ಪ್ರೋತ್ಸಾಹಧನ ನೀಡುವ ಮೂಲಕ ಸರ್ಕಾರ ರೈತರನ್ನು ಸನ್ಮಾನಿಸಿದೆಯೇ? (ಜಿಲ್ಲಾವಾರು ರೈತರ ಸಂಖ್ಯೆ, ಹೆಸರು ನೀಡುವುದು)